1557(2014) ಶ್ರೀ ಚರಂತಿಮಠ್ ವೀರಣ್ಣ ಚಂದ್ರಶೇಖರಯ್ಯ (ಬಾಗಲಕೋಟೆ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ. ಬಾಗಲಕೋಟೆ ಜಿಲ್ಲೆಯಲ್ಲಿ ಎಷ್ಟು ; ಅಗ್ನಿಶಾಮಕ ಠಾಣೆಗಳು ಇವೆ : ಅವುಗಳಿಗೆ ಮಂಜೂರಾದ ಸಿಬ್ಬಂದಿ ವರ್ಗದವರು ಈಗ ಕರ್ತವ್ಯ ನಿರ್ವಹಿಸುತ್ತಿರುವರೇ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಯಾವಾಗ ತುಂಬಲಾಗುವುದು.

ಆ. ಠಾಣೆಗಳಿಗೆ ಸಮರ್ಪಕ ವ್ಯವಸ್ಥೆ ಮತ್ತು ಸೌಲಭ್ಯಗಳುಳ್ಳ ಕಟ್ಟಡ ಮತ್ತು ವಾಹನಗಳನ್ನು ಒದಗಿಸಿಕೊಡಲಾಗಿದೆಯೇ ; ಇಲ್ಲವಾದಲ್ಲಿ ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ?

ಶ್ರೀ ಧರಂಸಿಂಗ್ (ಮುಖ್ಯಮಂತ್ರಿಗಳು) :

ಅ. ಬಾಗಲಕೋಟೆ ಜಿಲ್ಲೆಯು ಜಿಲ್ಲಾ ಕೇಂದ್ರವಾಗಿದ್ದು ಬಾಗಲಕೋಟೆ ಮತ್ತು ಜಮಖಂಡಿಯಲ್ಲಿ ಒಟ್ಟು ಎರಡು ಅಗ್ನಿಶಾಮಕ ಠಾಣೆಗಳು ಕಾರ್ಯ ನಿರ್ವಹಿಸುತ್ತಿವೆ. ಅಲ್ಲದೆ ಹಾಲಿ ಕರ್ತವ್ಯ ನಿರ್ವಹಿಸುತ್ತಿವೆ. ಅಲ್ಲದೆ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿವರ ಈ ಕೆಳಕಂಡಂತಿರುತ್ತದೆ.

	S	A	V
ಬಾಗಲಕೋಟೆ	26	16	10
ಜಮಖಂಡಿ	27	15	12

ಹೊಸ ಠಾಣೆಗಳಿಗೆ ಹಾಲಿ ಇರುವ ಸಿಬ್ಬಂದಿಗಳನ್ನು ನಿಯೋಜನೆ ಮಾಡಿರುವುದರಿಂದ ಸಿಬ್ಬಂದಿ ಹುದ್ದೆಗಳು ಖಾಲಿ ಇರುತ್ತವೆ. ಸಿಬ್ಬಂದಿಗಳ ನೇಮಕಾತಿ ಪ್ರಕ್ರಿಯೆ ಪ್ರಾರಂಭವಾಗಿದೆ. ಖಾಲಿ ಹುದ್ದೆಗಳನ್ನು ತುಂಬುವ ಅವಶ್ಯಕ್ತೆ ಕಂಡು ಬಂದರೆ ಸಧ್ಯದಲ್ಲೇ ಖಾಲಿ ಹುದ್ದೆಗಳನ್ನು ಭರ್ತಿಮಾಡುವ ಕ್ರಮ ತೆಗೆದುಕೊಳ್ಳಲಾಗುವುದು.

ಆ. ಬಾಗಲ ಕೋಟೆಯಲ್ಲಿ ಲೋಕೋಪಯೋಗಿ ಇಲಾಖೆಯವರು ನೀಡಿರುವ ಅನುದಾನದಿಂದ ಖಾಯಂ ಅಗ್ನಿಶಾಮಕ ಠಾಣೆ ಕಟ್ಟಡ ಹಾಗೂ 10 ವಸತಿ ಗೃಹಗಳನ್ನು ಈಗಾಗಲೇ ಸಿಬ್ಬಂದಿಗಳಿಗೆ ವಂಟನ ಮಾಡಲಾಗಿದೆ.

ಜಮಖಂಡಿ ಪಟ್ಟಣದಲ್ಲಿ 11ನೇ ಹಣಕಾಸು ಆಯೋಗವು ಒದಗಿಸಿರುವ ಅನುದಾನದಿಂದ ಖಾಯಂ ಅಗ್ನಿಶಾಮಕ ಠಾಣೆ ಕಟ್ಟಡವನ್ನು ನಿರ್ಮಿಸಲಾಗುತ್ತಿದೆ. ಸಿಬ್ಬಂದಿಗಳಿಗೆ ವಸತಿ ಗೃಹಗಳನ್ನು ನಿರ್ಮಿಸುವ ಬಗ್ಗೆ ಅನುದಾನ ಲಭ್ಯತೆಯ ಆಧಾರದ ಮೇಲೆ ಕ್ರಮ ತೆಗೆದುಕೊಳ್ಳಲಾಗುವುದು.

1558(2015) ಶ್ರೀ ಚರಂತಿಮಠ್ ವೀರಣ್ಣ ಚಂದ್ರಶೇಖರಯ್ಯ (ಬಾಗಲಕೋಟೆ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ. ಬಾಗಲಕೋಟೆ ಜಿಲ್ಲೆಯಲ್ಲಿ ಮೀನುಗಾರಿಕಾ ಇಲಾಖೆ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸಲಾಗಿರುವ ಯೋಜನೆಗಳ ವಿವರಗಳೇನು :

ಆ. ಒಳನಾಡು ಮೀನುಗಾರಿಕೆಗೆ ಹೆಚ್ಚು ಅವಕಾಶವಿದ್ದು, ಆ ಕುರಿತಾದ ಪ್ರೋತ್ಸಾಹಕ ಕಾರ್ಯಕ್ರಮಗಳೇನು ;

ಇ. ಕೆರೆ ಮತ್ತು ಜಲಾಶಯಗಳನ್ನು ಅಭಿವೃದ್ಧಿಪಡಿಸಿ ಮೀನುಗಾರಿಕೆಗೆ ಉತ್ತೇಜನ ನೀಡಲು ಸರ್ಕಾರ ಮುಂದಾಗುವುದೇ?

ಶ್ರೀ ಧರಂಸಿಂಗ್ (ಮಾನ್ಯ ಮುಖ್ಯ ಮಂತ್ರಿಗಳು) ;

ಅ. ಬಾಗಲಕೋಟೆ ಜಿಲ್ಲೆಯಲ್ಲಿ ಮೀನುಮರಿ ಉತ್ಪಾದನೆ , ಸಾಕಾಣಿಕೆ ಮತ್ತು ಹಂಚಿಕೆ ಯೋಜನೆಯಡಿಯಲ್ಲಿ 1.68 ಲಕ್ಷ ಮೀನುಮರಿಗಳನ್ನು ಮೀನುಗಾರಿಕೆ ಸಹಕಾರ ಸಂಘಗಳಿಗೆ ಗುತ್ತಿಗೆಗೆ ನೀಡಲಾದ ಕೆರೆಗಳಲ್ಲಿ ಬಿತ್ತನೆ ಮಾಡಲಾಗಿದೆ. "ಮೀನುಗಾರಿಕೆ ಸಹಕಾರ ಸಂಘಗಳಲ್ಲಿ ಪೂಡಿಕೆ" ಕಾರ್ಯಕ್ರಮದಡಿ ರೂ.20,000–00 ಶೇರು ಬಂಡವಾಳ ನೀಡುವ ವಿಷಯ ಹಾಗೂ "ಮೀನುಗಾರಿಕೆ ಸಲಕರಣೆಗಳನ್ನು ಖರೀದಿಸಲು ರೂ.20,000–00 ಸಾಲವನ್ನು ಕಾಟಾಪುರ ಮೀನುಗಾರಿಕೆ ಸಹಕಾರ ಸಂಘಕ್ಕೆ ನೀಡುವ ವಿಷಯಗಳು ಮಂಜೂರಾತಿಗಾಗಿ ಬಾಗಲಕೋಟೆ ಜಿಲ್ಲಾ ಪಂಚಾಯತ್ ಪರಿಶೀಲನೆಯಲ್ಲಿವೆ.

ಆ. ಜಿಲ್ಲೆಯಲ್ಲಿ ಲಭ್ಯವಿರುವ ಜಲಸಂಪನ್ಮೂಲಗಳಾದ ದೊಡ್ಡ ಕೆರೆ ಮತ್ತು ನದಿಗಳ ಮೀನು ಪಾಶುವಾರು ಹಕ್ಕನ್ನು ಮೀನುಮರಿ ಬಿತ್ತನೆ ಮಾಡಿ ಅಭಿವೃದ್ಧಿಪಡಿಸಲು ಮೀನುಗಾರಿಕೆ ಸಹಕಾರ ಸಂಘಗಳಿಗೆ ಗುತ್ತಿಗೆ ಆಧಾರದ ಮೇಲೆ ವಿಲೇವಾರಿ ಮಾಡಲಾಗುತ್ತದೆ.

ಇ. ಹೌದು, ಸರ್ಕಾರವು ಕೆರೆ ಮತ್ತು ಜಲಾಶಯಗಳಲ್ಲಿ ಮೀನುಗಾರಿಕೆ ಅಭಿವೃದ್ಧಿಪಡಿಸಲು ಆಸಕ್ತಿ ಹೊಂದಿದೆ, ಬಾಗಲಕೋಟೆ ಜಿಲ್ಲೆಯಲ್ಲಿ ಜಲಾಶಯ ಇರುವುದಿಲ್ಲ. ಆದರೆ ಕೆರೆ, ನದಿಗಳ ಮೀನು ಪಾಶುವಾರು ಹಕ್ಕನ್ನು ಗುತ್ತಿಗೆ ಆಧಾರದ ಮೀನುಗಾರಿಕೆ ಸಹಕಾರ ಸಂಘಗಳಿಗೆ ವಿಲೇವಾರಿ ಮಾಡಿ ಅವುಗಳಲ್ಲಿ ಮೀನುಮರಿ ಬಿತ್ತನೆ ಮಾಡಿ ಅಭಿವೃದ್ಧಿಗೊಳಿಸಲಾಗುತ್ತಿದೆ.

1559(2147) ಶ್ರೀ ಧ್ರುವನಾರಾಯಣ ಆರ್.(ಸಂತೇಮರಳ್ಳಿ) ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ. ಬೆಳ್ಳಿ ಬೆಳಕು ಯೋಜನೆಯಡಿಯಲ್ಲಿ ಮೀನುಗಾರಿಕೆ ಇಲಾಖೆಯಿಂದ ಮಂಜೂರಾದ ಮನೆಗಳೆಷ್ಟು ;

ಆ. ಸಂತೇಮರಹಳ್ಳಿ ವಿಧಾನ ಸಭಾ ಕ್ಷೇತ್ರಕ್ಕೆ ಬೆಳ್ಳಿ ಬೆಳಕು ಯೋಜನೆಯಡಿಯಲ್ಲಿ ನೀಡಿರುವ ಮನೆಗಳೆಷ್ಟು ?

ಶ್ರೀ ಧರಂಸಿಂಗ್ (ಮಾನ್ಯ ಮುಖ್ಯ ಮಂತ್ರಿಗಳು);

ಅ. ಬೆಳ್ಳಿ ಬೆಳಕು ಯೋಜನೆಯು ಮೀನುಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿಲ್ಲ. ಮೀನುಗಾರಿಕೆ ಇಲಾಖೆಯಿಂದ ಮತ್ಸ್ಯ ಆಶ್ರಯ ಯೋಜನೆಯು ಅನುಷ್ಠಾನಗೊಳ್ಳುತ್ತಿದ್ದು, ಮತ್ಸ್ಯ ಆಶ್ರಯ ಯೋಜನೆಯಡಿ ಒಟ್ಟು 10,000 ಮನೆಗಳನ್ನು 1998–99 ರಿಂದ 2003–04ರ ಅವಧಿಯಲ್ಲಿ ಮೀನುಗಾರರಿಗೆ ಮಂಜೂರು ಮಾಡಲಾಗಿದೆ.

ಆ. ಮತ್ಸ್ಯ ಆಶ್ರಯ ಯೋಜನೆಯಡಿ ಸಂತೇಮರಹಳ್ಳಿ ವಿಧಾನಸಭಾ ಕ್ಷೇತ್ರಕ್ಕೆ 10 ಮನೆಗಳನ್ನು ನೀಡಲಾಗಿದೆ.

1560 (2148)ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ) ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ;

ಅ. ಚಾಮರಾಜನಗರ ತಾಲ್ಲೂಕಿನಲ್ಲಿ 2003 ರಿಂದ 2004ರ ವರೆಗೆ ಸರ್ಕಾರದಿಂದ ಎಷ್ಟು ಜನರಿಗೆ ಸರ್ಕಾರಿ ಜಮೀನನ್ನು ಗಣಿಗಾರಿಕೆಗಾಗಿ ಮಂಜೂರು ಮಾಡಲಾಗಿದೆ ;